# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1467 |
| ಸದಸ್ಯರ ಹೆಸರು | : | ಶ್ರೀ ಎಂ.ಎ. ಗೋಪಾಲಸ್ವಾಮಿ |
| ಉತ್ತರಿಸುವ ದಿನಾಂಕ | : | 24-09-2021 |
| ಉತ್ತರಿಸುವ ಸಚಿವರು | : | ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಸ್ಥಾಪನೆಯ ಧ್ಯೇಯೋದ್ದೇಶಗಳೇನು; ಹಾಗೂ ಈ ಸಂಸ್ಥೆಯಿಂದ ಕಾರ್ಯಗತಗೊಳಿಸುತ್ತಿರುವ ಕಾರ್ಯಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)</td><td>ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಸ್ಥಾಪನೆಯ ಧ್ಯೇಯೋದ್ದೇಶಗಳು ಮತ್ತು ಕಾರ್ಯಗತಗೊಳಿಸುತ್ತಿರುವ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.</td></tr>
<tr><td>ಆ)</td><td>ಈ ಸಂಸ್ಥೆಯ ಕಾರ್ಯ ಚಟುವಟಿಕೆಗಳಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಳೆದ 5 ವರ್ಷಗಳಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಈ ಅನುದಾನದ ಬಳಕೆ ವಿವರಗಳನ್ನು ನೀಡುವುದು;</td><td>ಸಂಸ್ಥೆಯ ಕಾರ್ಯ ಚಟುವಟಿಕೆಗಳಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಳೆದ 5 ವರ್ಷಗಳಲ್ಲಿ ಬಿಡುಗಡೆ ಮಾಡಿರುವ ಅನುದಾನ ಮತ್ತು ಬಳಕೆ ವಿವರಗಳು ಕೆಳಕಂಡಂತಿದೆ.<br>(ರೂ. ಲಕ್ಷಗಳಲ್ಲಿ)
<table>
<tr><th>ಸಾಲು</th><th>ಕೇಂದ್ರ ಅನುದಾನ</th><th>ರಾಜ್ಯದ ಅನುದಾನ</th><th>ಒಟ್ಟು</th><th>ಖರ್ಚು</th><th>ಬಳಕೆ ವಿವರ</th></tr>
<tr><td>2016-17</td><td>117.00</td><td>621.49</td><td>738.49</td><td>738.49</td><td rowspan="5">ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಗೆ ಬುಡಕಟ್ಟು ವಸ್ತು ಸಂಗ್ರಹಾಲಯ, ತರಬೇತಿ ಕೇಂದ್ರ ಮತ್ತು ಕಚೇರಿ ಕಟ್ಟಡ ನಿರ್ಮಾಣ ಕಾರ್ಯಕ್ಕೆ ಮತ್ತು ಕೇಂದ್ರ ಮತ್ತು ರಾಜ್ಯ ಸರ್ಕಾರ ಮಂಜೂರು ಮಾಡಿರುವ ಸಂಶೋಧನಾ ಅಧ್ಯಯನ, ತರಬೇತಿ, ಮೌಲ್ಯಮಾಪನ, ಇತ್ಯಾದಿ ಕಾರ್ಯಕ್ರಮಗಳಿಗೆ, ಅಧಿಕಾರಿ/ ಸಿಬ್ಬಂದಿ ವೇತನ ಮತ್ತು ಭತ್ಯೆಗಳಿಗಾಗಿ ಖರ್ಚು ಮಾಡಲಾಗಿದೆ.</td></tr>
<tr><td>2017-18</td><td>130.00</td><td>522.49</td><td>652.49</td><td>652.49</td></tr>
<tr><td>2018-19</td><td>129.00</td><td>214.65</td><td>343.65</td><td>343.65</td></tr>
<tr><td>2019-20</td><td>91.50</td><td>81.00</td><td>172.50</td><td>172.50</td></tr>
<tr><td>2020-21</td><td>-</td><td>108.32</td><td>108.32</td><td>108.32</td></tr>
</table>
</td></tr>
</table>

<table>
<tr>
<td>ಇ)</td>
<td>ಈ ಸಂಸ್ಥೆಗೆ ಮಂಜೂರಾಗಿರುವ ಹುದ್ದೆಗಳೆಷ್ಟು; ಮತ್ತು ಖಾಲಿ ಇರುವ ಹುದ್ದೆಗಳೆಷ್ಟು; (ಹುದ್ದೆವಾರು ವಿವರ ನೀಡುವುದು)</td>
<td>ಸಂಸ್ಥೆಗೆ ಮಂಜೂರಾಗಿರುವ ಹುದ್ದೆಗಳು ಮತ್ತು ಖಾಲಿ ಇರುವ ಹುದ್ದೆಗಳ ವಿವ ಹುದ್ದೆವಾರು ಕೆಳಕಂಡಂತಿದೆ.
<table>
<tr><th rowspan="2">ಕ್ರ.ಸಂ.</th><th rowspan="2">ಹುದ್ದೆಯ ವಿವರ</th><th colspan="3">ಹುದ್ದೆಗಳ ವಿವರ</th></tr>
<tr><th>ಮಂಜೂರಾತಿ</th><th>ಕಾರ್ಯನಿರ್ವಹಿಸುತ್ತಿರುವ ಸಂಖ್ಯೆ</th><th>ಖಾಲಿ ಹುದ್ದೆಗಳು</th></tr>
<tr><td>1</td><td>ನಿರ್ದೇಶಕರು (ಸಂಶೋಧನೆ)</td><td>01</td><td>01</td><td>–</td></tr>
<tr><td>2</td><td>ಉಪನಿರ್ದೇಶಕರು (ಸಂಶೋಧನೆ)</td><td>01</td><td>01</td><td>–</td></tr>
<tr><td>3</td><td>ಸಂಶೋಧನಾಧಿಕಾರಿ</td><td>01</td><td>01</td><td>–</td></tr>
<tr><td>4</td><td>ಲೆಕ್ಕಾಧಿಕಾರಿ</td><td>01</td><td>01</td><td>–</td></tr>
<tr><td>5</td><td>ಇನ್ವೆಸ್ಟಿಗೇಟರ್ಸ್/ಫೀಲ್ಡ್ ಅಸಿಸ್ಟೆಂಟ್ಸ್</td><td>05</td><td>–</td><td>05</td></tr>
<tr><td>6</td><td>ಗ್ರಂಥಪಾಲಕ</td><td>01</td><td>–</td><td>01</td></tr>
<tr><td>7</td><td>ಮ್ಯೂಸಿಯಂ ಕ್ಯುರೇಟರ್</td><td>01</td><td>–</td><td>01</td></tr>
<tr><td>8</td><td>ಕಚೇರಿ ಅಧೀಕ್ಷಕರು</td><td>01</td><td>–</td><td>01</td></tr>
<tr><td>9</td><td>ಪ್ರಥಮ ದರ್ಜೆ ಸಹಾಯಕರು</td><td>02</td><td>02</td><td>–</td></tr>
<tr><td>10</td><td>ಶೀಘ್ರಲಿಪಿಗಾರ</td><td>01</td><td>–</td><td>01</td></tr>
<tr><td>11</td><td>ಕಂಪ್ಯೂಟರ್ ಆಪರೇಟರ್</td><td>02</td><td>02</td><td>–</td></tr>
<tr><td>12</td><td>ದ್ವಿತೀಯ ದರ್ಜೆ ಸಹಾಯಕರು</td><td>02</td><td>–</td><td>02</td></tr>
<tr><td>13</td><td>ವಾಹನ ಚಾಲಕರು</td><td>02</td><td>–</td><td>02</td></tr>
<tr><td>14</td><td>ಗ್ರೂಪ್ ಡಿ</td><td>05</td><td>–</td><td>05</td></tr>
<tr><td>15</td><td>ರಾತ್ರಿ ಕಾವಲುಗಾರ</td><td>01</td><td>–</td><td>01</td></tr>
<tr><td></td><td>ಒಟ್ಟು ಹುದ್ದೆಗಳು</td><td>27</td><td>08</td><td>19</td></tr>
</table>
ಸದರಿ ಸಂಸ್ಥೆಯ ಕಾರ್ಯಕ್ರಮಗಳನ್ನು ನಡೆಸಲು ಮಂಜೂರಾದ ಹುದ್ದೆಗಳ ಪೈ ಒಟ್ಟು 11 ಜನರನ್ನು ಹೊರಗುತ್ತಿಗೆ ಆಧಾರದ ಮೇಲೆ ತೆಗೆದುಕೊಂಡ ಕಾರ್ಯನಿರ್ವಹಿಸುತ್ತಿದೆ.</td>
</tr>
<tr>
<td>ಈ)</td>
<td>ಅಧಿಕಾರಿ ಮತ್ತು ಸಿಬ್ಬಂದಿಗಳ ವೇತನ ಪಾವತಿಯನ್ನು ಹೆಚ್.ಆರ್.ಎಂ.ಎಸ್. ಮೂಲಕ ಸೆಳೆಯಲಾಗುತ್ತಿದೆಯೇ; (ಸಂಪೂರ್ಣ ವಿವರ ನೀಡುವುದು)</td>
<td>ಅಧಿಕಾರಿಗಳು ಮತ್ತು ಸಿಬ್ಬಂದಿಗಳ ವೇತನವನ್ನು ಲೆಕ್ಕಶೀರ್ಷಿಕೆ 2225-02-001-0-02 ಅಡಿಯಲ್ಲಿ ಹೆಚ್.ಆರ್.ಎಂ.ಎಸ್. ಮೂಲಕ ಖಜಾನೆ-2 ರ ಸೆಳೆಯಲಾಗುತ್ತಿದೆ.</td>
</tr>
<tr>
<td>ಉ)</td>
<td>ಈ ಸಂಸ್ಥೆಯಲ್ಲಿ ಅನ್ಯ ಇಲಾಖೆಗಳಿಂದ ಬಂದು ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳು ಯಾರು</td>
<td>ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳನ್ನು ಹೊರತು ಪಡಿಸಿ ಇತ ಇಲಾಖೆಗಳಿಂದ ಯಾರು ನಿಯೋಜನೆ ಮೇಲೆ ಕಾರ್ಯ ನಿರ್ವಹಿಸುತ್ತಿರುವುದಿಲ್ಲ.</td>
</tr>
</table>

| | | |
|---|---|---|
| | ಯಾರು, ಅವರು ಯಾವ ಯಾವ ಇಲಾಖೆಗಳಿಂದ ಬಂದಿರುತ್ತಾರೆ; ಎಷ್ಟು ವರ್ಷಗಳಿಂದ ನಿಯೋಜನೆಯಲ್ಲಿದ್ದಾರೆ? (ವಿವರ ನೀಡುವುದು) | |

ಸಕಇ 327 ಎಸ್‌ಟಿಪಿ 2021

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು

ಚುಕ್ಕೆ ಗುರುತಿಲ್ಲ ಪ್ರಶ್ನೆ ಸಂಖ್ಯೆ: 1467 ಕ್ಕೆ ಅನುಬಂಧ

**ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಸ್ಥಾಪನೆಯ ಧ್ಯೇಯೋದ್ದೇಶಗಳು ಮತ್ತು ಕಾರ್ಯಗತಗೊಳಿಸುತ್ತಿರುವ ಕಾರ್ಯಕ್ರಮಗಳು ಕೆಳಕಂಡಂತಿವೆ:**

1. ಸಂಶೋಧನೆ: ಕರ್ನಾಟಕ ರಾಜ್ಯದಲ್ಲಿನ ಪರಿಶಿಷ್ಟ ಪಂಗಡದ ಬುಡಕಟ್ಟು ಸಮುದಾಯಗಳ ಜೀವನಶೈಲಿ, ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಹಾಗೂ ಆರೋಗ್ಯ ಸ್ಥಿತಿಗತಿಗಳ ಸಂಶೋಧನಾ ಅಧ್ಯಯನ ಕೈಗೊಳ್ಳುವುದು.

2. ತರಬೇತಿ/ ಅರಿವು ಮೂಡಿಸುವ ಕಾರ್ಯಕ್ರಮ: ಬುಡಕಟ್ಟು ಸಮುದಾಯದ ನಿರುದ್ಯೋಗಿ ಯುವಕ/ಯುವತಿಯರಿಗೆ ಕೌಶಲ್ಯಾಧಾರಿತ ಮತ್ತು ಸ್ವಯಂ ಉದ್ಯೋಗ ಕೈಗೊಳ್ಳಲು ವೃತ್ತಿ ತರಬೇತಿ, ಪರಿಶಿಷ್ಟ ಪಂಗಡದ ಬುಡಕಟ್ಟು ಸಮುದಾಯದವರಿಗೆ ಸರ್ಕಾರದಿಂದ ದೊರೆಯುವ ವಿವಿಧ ಯೋಜನೆ / ಕಾರ್ಯಕ್ರಮಗಳ ಸೌಲಭ್ಯಗಳ ಕುರಿತು ಬುಡಕಟ್ಟು ಸಮುದಾಯದ ಜನಪ್ರತಿನಿಧಿಗಳು ಮತ್ತು ಮುಖಂಡರುಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳು, ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರವನ್ನು ಪಡೆಯುವಾಗ ಮತ್ತು ನೀಡುವಾಗ ಅನುಸರಿಸಬೇಕಾದ ಕಾನೂನು ಕ್ರಮಗಳ ಕುರಿತು ಬುಡಕಟ್ಟು ಜನ ಪ್ರತಿನಿಧಿಗಳಿಗೆ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳಿಗೆ ತರಬೇತಿ ನೀಡುವುದು. ಅರಣ್ಯ ಹಕ್ಕು ಕಾಯ್ದೆ ಕುರಿತು ಅರಣ್ಯ ಇಲಾಖೆ ಅಧಿಕಾರಿಗಳು, ಸಮಾಜ ಕಲ್ಯಾಣ/ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳು ಹಾಗೂ ಬುಡಕಟ್ಟು ಪ್ರತಿನಿಧಿಗಳಿಗೆ ತರಬೇತಿ ನೀಡುವುದು. ಜೊತೆಗೆ ಆಶ್ರಮ ಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ನಿಟ್ಟಿನಲ್ಲಿ ಗಣಿತ, ವಿಜ್ಞಾನ ಮತ್ತು ಆಂಗ್ಲ ಭಾಷೆ ಬೋಧಿಸುವ ಶಿಕ್ಷಕರಿಗೆ ಪುನರ್ ಮನನ ತರಬೇತಿಗಳನ್ನು ಆಯೋಜಿಸುವುದು.

3. ಮೌಲ್ಯಮಾಪನ: ಪರಿಶಿಷ್ಟ ಪಂಗಡದವರಿಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳು/ ಕಾರ್ಯಕ್ರಮಗಳ ಸೌಲಭ್ಯಗಳು ಬುಡಕಟ್ಟು ಸಮುದಾಯದವರಿಗೆ ಪರಿಣಾಮಕಾರಿಯಾಗಿ ತಲುಪುತ್ತಿರುವ ಕುರಿತು ಹಾಗೂ ಸದರಿ ಯೋಜನೆಗಳ ಅನುಷ್ಠಾನದಿಂದ ಶೈಕ್ಷಣಿಕ, ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿಗತಿಗಳಲ್ಲಿ ಬದಲಾವಣೆಗಳಾಗಿರುವ ಬಗ್ಗೆ ಮೌಲ್ಯಮಾಪನ ಅಧ್ಯಯನ ಕೈಗೊಳ್ಳುವುದು.

4. ಕುಲಶಾಸ್ತ್ರೀಯ ಅಧ್ಯಯನ: ಸರ್ಕಾರ ಕಾಲಕಾಲಕ್ಕೆ ನೀಡುವ ಆದೇಶದ ಮೇರೆಗೆ ರಾಜ್ಯದಲ್ಲಿನ ವಿವಿಧ ಜಾತಿ/ಸಮುದಾಯಗಳನ್ನು ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಸದರಿ ಸಮುದಾಯಗಳ ಸಮಗ್ರವಾದ ಕುಲಶಾಸ್ತ್ರೀಯ ಅಧ್ಯಯನ ಕೈಗೊಳ್ಳುವುದು.

5. ಬುಡಕಟ್ಟು ಭಾಷೆಗಳಲ್ಲಿ ನಿಘಂಟುರಚನೆ (Preparation of Dictionary in Tribal Languages): ಬುಡಕಟ್ಟು ಸಮುದಾಯದವರ ಭಾಷೆಯನ್ನು ಉಳಿಸುವ ಹಾಗೂ ಮುಂದಿನ ಪೀಳಿಗೆಯವರಿಗೆ ಬೆಳೆಸುವ ಮತ್ತು ನಾಗರಿಕ ಸಮಾಜಕ್ಕೆ ಬುಡಕಟ್ಟು ಭಾಷೆಗಳನ್ನು ಪರಿಚಯಿಸುವ ನಿಟ್ಟಿನಲ್ಲಿ ಬುಡಕಟ್ಟು ಸಮುದಾಯಗಳ ಭಾಷೆಗಳಲ್ಲಿ ನಿಘಂಟು (Dictionary) ತಯಾರಿಸುವುದು.

6. ಬುಡಕಟ್ಟು ಭಾಷೆಗಳಲ್ಲಿ ಪ್ರಾಥಮಿಕೆಗಳ ರಚನೆ (Preparation of Primers in Tribal Languages): ಬುಡಕಟ್ಟು ಸಮುದಾಯದ ಮಕ್ಕಳಲ್ಲಿ ಸಾಕ್ಷರತೆಯನ್ನು ಹೆಚ್ಚಿಸುವ ಹಾಗೂ ಅವರ ಕಲಿಕೆಯಲ್ಲಿ ಆಸಕ್ತಿ ಹೆಚ್ಚಿಸುವ ಹಿನ್ನೆಲೆಯಲ್ಲಿ ಬುಡಕಟ್ಟು ಸಮುದಾಯಗಳ ಭಾಷೆಗಳಲ್ಲಿ ಪ್ರಾಥಮಿಕೆಗಳನ್ನು ರಚಿಸುವುದು.

7. ವಿಚಾರ ಸಂಕಿರಣ/ಕಾರ್ಯಾಗಾರ ಏರ್ಪಡಿಸುವುದು: ಬುಡಕಟ್ಟು ಸಮುದಾಯಗಳ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ಆರೋಗ್ಯ ಮತ್ತು ಇತರೆ ವಿಷಯಗಳ ಕುರಿತು ರಾಷ್ಟ್ರೀಯ ಹಾಗೂ ಪ್ರಾದೇಶಿಕ ವಿಚಾರ ಸಂಕಿರಣ ಕಾರ್ಯಕ್ರಮಗಳನ್ನು ಆಯೋಜಿಸುವುದು.

8. **ರಾಜ್ಯಮಟ್ಟದ ಬುಡಕಟ್ಟು ಉತ್ಸವ ಆಚರಣೆ:** ವಿವಿಧ ಬುಡಕಟ್ಟು ಸಮುದಾಯಗಳ ಕಲೆ, ಸಂಸ್ಕೃತಿ ಮತ್ತು ಕಲಾತಂಡಗಳ ಕಲಾಪ್ರದರ್ಶನ, ಕರಕುಶಲ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಮಳಿಗೆಗಳನ್ನು ಸ್ಥಾಪಿಸುವ ಮೂಲಕ ರಾಜ್ಯಮಟ್ಟದ ಬುಡಕಟ್ಟು ಉತ್ಸವಗಳನ್ನು ಆಯೋಜಿಸುವುದು.

9. **ಬುಡಕಟ್ಟು ಸಮುದಾಯದವರ ಅಂತರ ರಾಜ್ಯ ಪ್ರವಾಸ:** ಹೊರ ರಾಜ್ಯಗಳಲ್ಲಿ ಪರಿಶಿಷ್ಟ ಪಂಗಡದವರ ಅಭಿವೃದ್ಧಿ ಕಾರ್ಯಕ್ರಮಗಳನ್ನು ವೀಕ್ಷಿಸಲು ರಾಜ್ಯದ ವಿವಿಧ ಪರಿಶಿಷ್ಟ ಪಂಗಡಗಳ ಪ್ರತಿನಿಧಿಗಳನ್ನು ಒಬ್ಬ ನೋಡಲ್ ಅಧಿಕಾರಿಯೊಂದಿಗೆ ಒಂದು ರಾಜ್ಯಕ್ಕೆ ನಿಗಧಿತ ಅವಧಿಗೆ ನಿಯೋಜಿಸುವುದು.

10. **ಗಣರಾಜ್ಯೋತ್ಸವ ಕಾರ್ಯಕ್ರಮ ವೀಕ್ಷಣೆಗೆ ರಾಜ್ಯದ ಇಬ್ಬರು ಬುಡಕಟ್ಟು ಸಮುದಾಯದ ಪ್ರತಿನಿಧಿಗಳನ್ನು ನವದೆಹಲಿಗೆ ನಿಯೋಜಿಸುವುದು:** ಪ್ರತಿ ವರ್ಷ ನವದೆಹಲಿಯಲ್ಲಿ ನಡೆಯುವ ಗಣರಾಜ್ಯೋತ್ಸವ ಸಮಾರಂಭದ ವೀಕ್ಷಣೆಗಾಗಿ ರಾಜ್ಯದಿಂದ ಬುಡಕಟ್ಟು ಸಮುದಾಯದ ಒಬ್ಬ ಮಹಿಳೆ ಹಾಗೂ ಒಬ್ಬ ಪುರುಷ ಸೇರಿದಂತೆ ಇಬ್ಬರು ಪ್ರತಿನಿಧಿಗಳನ್ನು ಒಬ್ಬ ನೋಡಲ್ ಅಧಿಕಾರಿಯೊಂದಿಗೆ ನವದೆಹಲಿಗೆ ನಿಯೋಜಿಸುವುದು.

11. **ಸಾಕ್ಷ್ಯಚಿತ್ರಗಳ ನಿರ್ಮಾಣ:** ಕರ್ನಾಟಕ ರಾಜ್ಯದಲ್ಲಿ ವಾಸಿಸುತ್ತಿರುವ 50 ಪರಿಶಿಷ್ಟ ಪಂಗಡದ ಬುಡಕಟ್ಟುಗಳ ಸಮುದಾಯಗಳ ಜೀವನಶೈಲಿ, ಆಚಾರ-ವಿಚಾರ, ಕಲೆ-ಸಂಸ್ಕೃತಿ, ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ ಸರ್ಕಾರ ನೀಡುತ್ತಿರುವ ವಿವಿಧ ಸೌಲಭ್ಯಗಳ ಕುರಿತು ಸಾಕ್ಷ್ಯಚಿತ್ರಗಳನ್ನು ನಿರ್ಮಾಣ ಮಾಡುವುದು.

12. **ಅರಿವು ಮೂಡಿಸುವ /ಉಚಿತ ಆರೋಗ್ಯ ತಪಾಸಣಾ ಶಿಬಿರಗಳ ಆಯೋಜನೆ:** ಪರಿಶಿಷ್ಟ ಪಂಗಡದ ಬುಡಕಟ್ಟು ಸಮುದಾಯಗಳು ಹಲವಾರು ಖಾಯಿಲೆಗಳಿಂದ ಬಳಲುತ್ತಿದ್ದು, ಈ ಸಮುದಾಯಗಳು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ನುರಿತ ತಜ್ಞ ವೈದ್ಯರಿಂದ ಆರೋಗ್ಯದ ಅರಿವು ಮೂಡಿಸುವ ಜೊತೆಗೆ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸುವುದು.

13. **ಬುಡಕಟ್ಟು ವಸ್ತು ಸಂಗ್ರಹಾಲಯ ಸ್ಥಾಪನೆ ಮತ್ತು ನಿರ್ವಹಣೆ:** ವಿವಿಧ ಬುಡಕಟ್ಟು ಸಮುದಾಯಗಳು ಉಪಯೋಗಿಸುತ್ತಿದ್ದ ಮತ್ತು ಪ್ರಸ್ತುತ ಉಪಯೋಗಿಸುತ್ತಿರುವ ವಿವಿಧ ಪರಿಕರಗಳನ್ನು ಸಂಗ್ರಹಿಸುವ ಮೂಲಕ ರಾಜ್ಯ ಮಟ್ಟದಲ್ಲಿ ಬುಡಕಟ್ಟು ವಸ್ತು ಸಂಗ್ರಹಾಲಯವನ್ನು ಸ್ಥಾಪಿಸಿ ಅವರ ಜೀವನ ಶೈಲಿ ಬಗ್ಗೆ ಇತರೆ ಸಮುದಾಯದವರು ತಿಳಿದುಕೊಳ್ಳಲು ಪ್ರದರ್ಶನಕ್ಕಾಗಿ ಕಾಯ್ದಿರಿಸುವುದು.

14. **ಗ್ರಂಥಾಲಯ ಸ್ಥಾಪನೆ ಮತ್ತು ನಿರ್ವಹಣೆ :** ವಿವಿಧ ಬುಡಕಟ್ಟು ಸಮುದಾಯಗಳ ಕಲೆ, ಸಂಸ್ಕೃತಿ, ಜೀವನ ಶೈಲಿ, ವಿಷಯಗಳ ಕುರಿತು ವಿವಿಧ ಲೇಖಕರು ಬರೆದಿರುವ ಗ್ರಂಥಗಳನ್ನು ಸಂಗ್ರಹಿಸಿ, ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ಸಂಶೋಧನಾ ಅಧ್ಯಯನಕ್ಕಾಗಿ ಹಾಗೂ ಸಂಶೋಧನೆ ವಿಭಾಗದ ಸಿಬ್ಬಂದಿ ವರ್ಗದವರಿಗೆ ಮತ್ತು ಸಂಶೋಧನಾಸಕ್ತರ ಪರಾಮರ್ಶೆಗಾಗಿ ಗ್ರಂಥಾಲಯದಲ್ಲಿ ಕಾಯ್ದಿರಿಸುವುದು.

15. **ಪ್ರಕಟಣೆಗಳು:** ಸಂಸ್ಥೆಯ ಮೂಲಕ ಕೈಗೊಳ್ಳುವ ಸಂಸೋಧನಾ ಅಧ್ಯಯನಗಳು, ಕುಲಶಾಸ್ತ್ರೀಯ ಅಧ್ಯಯನ, ಮೌಲ್ಯಮಾಪನಾ ಅಧ್ಯಯನ ವರದಿಗಳು ಹಾಗೂ ವಿವಿಧ ಬುಡಕಟ್ಟು ಸಮುದಾಯಗಳ ಜೀವನ ಶೈಲಿಯ ಚಿತ್ರಗಳನ್ನು ಒಳಗೊಂಡಂತಹ ವಾರ್ಷಿಕ ಕ್ಯಾಲೆಂಡರುಗಳು, ಬುಡಕಟ್ಟು ಸಮುದಾಯದವರಿಗೆ ಸರ್ಕಾರದಿಂದ ದೊರೆಯುತ್ತಿರುವ ಸೌಲಭ್ಯಗಳ ಮಾಹಿತಿ ಒಳಗೊಂಡ ಕೈಪಿಡಿಗಳು, ಅರಣ್ಯ ಹಕ್ಕು ಕಾಯ್ದೆ ಹಾಗೂ ಉದ್ಯೋಗ ಖಾತ್ರಿ ಯೋಜನೆ ಕುರಿತು ಮಾಹಿತಿಯ ಕೈಪಿಡಿಗಳು, ಸಂಸ್ಥೆಯ ಕಾರ್ಯ ಚಟುವಟಿಕೆಗಳ ಮಡಿಕೆ ಹಾಳೆಗಳನ್ನು ಮುದ್ರಿಸಿ ಪ್ರಕಟಿಸುವುದು.

ಮೇಲ್ಕಂಡ ಎಲ್ಲಾ ಕಾರ್ಯಕ್ರಮಗಳನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರ ಬಿಡುಗಡೆ ಮಾಡುವ ವಾರ್ಷಿಕ ಅನುದಾನಕ್ಕೆ ಅನುಗುಣವಾಗಿ ಕಾರ್ಯಗತಗೊಳಿಸಲಾಗುತ್ತಿದೆ.

***